<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ</u>

**ಸೇಡಂ**

ಸಿ.ಸಿ. ನಂಃ 420/2017 ಸಿಡಬ್ಲೂ ಃ 10 ಪಿಡಬ್ಲೂಃ 08

ಪ್ರಮಾಣವಚನ ಬೋಧಿಸಲಾಯಿತು ದಿಃ 12-08-2026

ಹೆಸರು ಃ ಲಿಂಗಣ್ಣ

ತಂದೆ ಹೆಸರು ಃ ಶಿವಣ್ಣ

ವಯಸ್ಸು ಃ 64 ವರ್ಷ

ಉದ್ಯೋಗ ಃ ನಿವೃತ ASI

ವಾಸಸ್ಥಳ ಃ ಕಲಬುರಗಿ

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ**

ನಾನು ದಿಃ 16.06.2015 ರಿಂದ ದಿಃ 18.10.2018 ವರೆಗೆ ಸೇಡಂ ಪೋಲಿಸ್ ಠಾಣೆಯಲ್ಲಿ ಮುಖ್ಯ ಪೇದೆ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ನಾನು ದಿಃ 03.03.2017 ರಂದು ಮಧ್ಯಾಹ್ನ 1-15 ಗಂಟೆಗೆ ಸುಮಾರಿಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಸರ್ಕಾರಿ ಆಸ್ಪತ್ರೆ ಸೇಡಂದಿಂದ MLC ಬಂಂದ ಮೇರೆಗೆ ಆಸ್ಪತ್ರೆಗೆ ಭೇಟಿ ನೀಡಿ ಚಾಸಾಃ 1 ರವರು ಹೇಳಿಕೆಯನ್ನು ದಾಖಲಸಿರುತ್ತೇನೆ. ಸದರಿ ಹೇಳಿಕೆ ದೂರಿನ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ 41/2017 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು. ಸದರಿ ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೆ ನಿಪಿ-1 ಎಂದು ಗುರುತಿಸಲಾಗಿದೆ. ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1 (ಬಿ) ಮತ್ತು (ಸಿ) ಎಂದು ಗುರುತಿಸಲಾಯಿತು. ಪ್ರ.ವ. ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-6 ಎಂದು ಸಾಕ್ಷಿಯ ಸಹಿಯನ್ನು ನಿಪಿ-6 (ಎ) ಎಂದು ಗುರುತಿಲಾಯಿತು.

ನಂತರ ದಿಃ 03.03.2017 ರಂದು ಘಟನಾ ಸ್ಥಳಕ್ಕೆ ಭೇಟಿ ನೀಡಿ ಫಿರ್ಯಾದಿದಾರರು ತೋರಿಸಿದಂತೆ ಪಂಚರಾದ ಚಾಸಾ-2 ಮತ್ತು 3 ರವರ ಸಮಕ್ಷಮ ಗುನ್ನೆ ಸ್ಥಳದ ಪಂಚನಾಮೆಯನ್ನು ಸಮಯ 3-30 ರಿಂದ 4-30 ವರೆಗೆ ಜರುಗಿಸಿ ಸ್ಥಳದಿಂದ ಒಂದು ಬಡಿಗೆಯನ್ನು ಜಪ್ತಿಪಿಡಿಸಿರುತ್ತೇನೆ. ಸಾಕ್ಷಿಯು ಸದರಿ ಪಂಚನಾಮೆಯನ್ನು ಈಗ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದೆ ಮತ್ತು ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುಡಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ-2 (ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಸಾಕ್ಷಿಯು ಒಂದು ಬಡಿಗೆಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೆ ಮು.ಮಾ -1 ಎಂದು ಗುರುತಿಸಲಾಗಿದೆ. ಪಂಚನಾಮೆ ಕಾಲಕ್ಕೆ ತೆಗೆದಿರುವ ಭಾವ ಚಿತ್ರವನ್ನು ನಿಪಿ-7 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-7 (ಎ) ಎಂದು ಗುರುತಿಸಲಾಯಿತು. ನಂತರ ಸಾಕ್ಷಿದಾರರಾದ ಚಾಸಾ-4 ರಿಂದ 8 ರವರ ಹೇಳಿಕೆಯನ್ನು ದಾಖಲಿಸಿರುತ್ತೇನೆ. ನಂತರ ಮುಂದಿದ ತನಿಖೆಗಾಗಿ ಕಡತವನ್ನು ಚಾಸಾ-11 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀಸವಾಲುಃ** ಆರೋಪಿ ಪರ ಶ್ರೀ RM ವಕೀಲರಿಂದ ಃ

ನಾನು ದಿಃ 03.03.2017 ರಂದು ಮಧ್ಯಾಹ್ನ 1-15 ಗಂಟೆಗೆ ಸುಮಾರಿಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಸರ್ಕಾರಿ ಆಸ್ಪತ್ರೆ ಸೇಡಂದಿಂದ MLC ಬಂಂದ ಮೇರೆಗೆ ಆಸ್ಪತ್ರೆಗೆ ಭೇಟಿ ನೀಡಿ ಚಾಸಾಃ 1 ರವರು ಹೇಳಿಕೆಯನ್ನು ದಾಖಲಸಿರುತ್ತೇನೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ದೂರಿನ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ 41/2017 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ನಂತರ ದಿಃ 03.03.2017 ರಂದು ಘಟನಾ ಸ್ಥಳಕ್ಕೆ ಭೇಟಿ ನೀಡಿ ಫಿರ್ಯಾದಿದಾರರು ತೋರಿಸಿದಂತೆ ಪಂಚರಾದ ಚಾಸಾ-2 ಮತ್ತು 3 ರವರ ಸಮಕ್ಷಮ ಗುನ್ನೆ ಸ್ಥಳದ ಪಂಚನಾಮೆಯನ್ನು ಸಮಯ 3-30 ರಿಂದ 4-30 ವರೆಗೆ ಜರುಗಿಸಿ ಸ್ಥಳದಿಂದ ಒಂದು ಬಡಿಗೆಯನ್ನು ಜಪ್ತಿಪಿಡಿಸಿರುತ್ತೇನೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಂತರ ಸಾಕ್ಷಿದಾರರಾದ ಚಾಸಾ-4 ರಿಂದ 8 ರವರ ಹೇಳಿಕೆಯನ್ನು ದಾಖಲಿಸಿರುತ್ತೇನೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಂತರ ಮುಂದಿದ ತನಿಖೆಗಾಗಿ ಕಡತವನ್ನು ಚಾಸಾ-11 ರವರಿಗೆ ವಹಿಸಿಕೊಟ್ಟಿರುತ್ತೇನೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರು ವಿರುದ್ಧ ಯಾವುದೇ

ಅಪರಾಧ ಸಾಬಿತು ಆಗದೆ ಇದ್ದರು ಸಹ ಚಾಸಾ-1 ರವರಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ವರದಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಮು.ಮಾ -1 ಸಾಮಾನ್ಯವಾಗಿ ಎಲ್ಲ ಕಡೆ ಲಭ್ಯವಿರುತ್ತದೆ ಎಂದರೆ ಸರಿ. ಮು.ಮಾಲಿಗೂ ಆರೋಪಿಗು ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ ದಂ. ಸೇಡಂ.**